ಅಧ್ಯಕ್ಷರು: ಅವರನ್ನು ಕರೆಯುವ ಎಲ್ಲಾ ಪ್ರಯತ್ನವನ್ನು ಮಾಡಿದ್ದೇವೆ. ಅವರು ಸಿಗುತ್ತಿಲ್ಲ. ಇನ್ನೊಂದು ಸಾರಿ ಪ್ರಯತ್ನ ಮಾಡುತ್ತೇವೆ. ಹಾಗೆಂದು ಹೇಳಿ ಸದನವನ್ನು ಮುಂದೂಡವುದಕ್ಕಾಗುವುದಿಲ್ಲ.

4. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಅಧ್ಯಕ್ಷರು: ಮಾನ್ಯ ಮುಖ್ಯಮಂತ್ರಿಗಳು.

I) ಶ್ರೀ ಬಿ.ಎಸ್. ಯಡಿಯೂರಪ್ಪ, (ಮಾನ್ಯ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ನಾಗರೀಕ ಸೇವಾ 1978ರ ಅಧಿನಿಯಮ 8(3)ರನ್ವಯ

1. ಕರ್ನಾಟಕ ನಾಗರೀಕ ಸೇವಾ ಅಧಿನಿಯಮ 1978ಕ್ಕೆ (ಸಮೂಹ 'ಎ' ಅಧಿಕಾರಿಗಳ ಉನ್ನತ ಅಧ್ಯಯನಕ್ಕೆ ತರಬೇತಿ ಮತ್ತು ಪ್ರತಿಯೋಜನೆ ರಜೆ) ನಿಯಮಗಳು 2008ಕ್ಕೆ ತಿದ್ದುಪಡಿಗೆ ಸಂಬಂಧಿಸಿದಂತೆ ನಿಯಮ 1ಕ್ಕೆ ತಿದ್ದುಪಡಿ ಮಾಡಿ ಹೊರಡಿಸಿರುವ ಅಧಿಸೂಚನೆ ಸಂಖ್ಯೆ:ಎಫ್‌ಡಿ 05 ಎಸ್‌ಆರ್‌ಎ 2008, ದಿನಾಂಕ 06.07.2010ರ ಅಧಿಸೂಚನೆ.
2. ಸರ್ಕಾರಿ ನೌಕರರ (ಕುಟುಂಬ ನಿವೃತ್ತಿ ವೇತನ) ನಿಯಮಗಳು, 2002ಕ್ಕೆ ಕರ್ನಾಟಕ ಸಿವಿಲ್ (ಅಸಾಧಾರಣ ನಿವೃತ್ತಿ ವೇತನ) ನಿಯಮಗಳು 2003 ಹಾಗೂ ಕರ್ನಾಟಕ ಸಿವಿಲ್ ಸೇವಾ ನಿಯಮ 2ಸಿ ರ ಉಪಬಂಧಗಳನ್ನು ಮಾರ್ಪಡಿಸುವ/ತಿದ್ದುಪಡಿ ಮಾಡುವ ಬಗ್ಗೆ ದಿನಾಂಕ 19.11.2010ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ ಎಫ್‌ಡಿ 2 ಎಸ್‌ಆರ್‌ಎ 2010, ಅಧಿಸೂಚನೆ ಸಂಖ್ಯೆ–II ಎಫ್‌ಡಿ 2 ಎಸ್‌ಆರ್‌ಎ 2010 ಹಾಗೂ ಅಧಿಸೂಚನೆ ಸಂಖ್ಯೆ–III ಎಫ್‌ಡಿ 2 ಎಸ್‌ಆರ್‌ಎ 2010ರ ಅಧಿಸೂಚನೆಗಳು.

3) ಕರ್ನಾಟಕ ನಾಗರೀಕ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) ಸಾಮಾನ್ಯ ನಿಯಮಗಳು 2006 ನಿಯಮ 6ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಿ ಹೊರಡಿಸಲಾದ ದಿನಾಂಕ 28.03.2011ರ ಅಧಿಸೂಚನೆ ಸಂಖ್ಯೆ ಸಿಆಸುಇ 50 ಸೇವನೆ 2010 ರ ಅಧಿಸೂಚನೆಗಳನ್ನು ಮಂಡಿಸುತ್ತೇನೆ.

1957ರ ಕರ್ನಾಟಕ ಮಾರಾಟ ತೆರಿಗೆ ಕಾಯ್ದೆಯ ಪ್ರಕರಣ 39ರ ಮೇರೆಗೆ

4) ಮೀನುಗಾರರಿಗೆ ಮೀನುಗಾರಿಕೆ ಚಟುವಟಿಕೆಯಲ್ಲಿ ಬಳಸಲು ಸರಬರಾಜು ಮಾಡುವುದಕ್ಕಾಗಿ ಡೀಸೆಲ್ ಮೇಲಿನ ಮಾರಾಟದ ತೆರಿಗೆಯನ್ನು ದಿನಾಂಕ 01.04.2011 ರಿಂದ ಜಾರಿಗೆ ಬರುವಂತೆ ವಿನಾಯಿತಿ ನೀಡಿ ದಿನಾಂಕ 29.03.2011ರಂದು ಹೊರಡಿಸಲಾದ ಎಫ್‌ಡಿ 35 ಸಿಎಸ್‌ಎಲ್ 11 ಅಧಿಸೂಚನೆ (I)

2003ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಕಲಂ 89ನೇ ಪ್ರಕರಣದ ಮೇರೆಗೆ

5) 2003ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಕಾಯ್ದೆಯಡಿ ಭತ್ತ ಮತ್ತು ಅಕ್ಕಿ, ಗೋಧಿ, ಬೇಳೆಕಾಳುಗಳು, ಅಕ್ಕಿ ಮತ್ತು ಗೋಧಿ ಹಿಟ್ಟು ಹಾಗೂ ರವೆ, ಗೋಧಿಯ ಮೈದಾ ಮಾರಾಟದ ಮೇಲಿನ ತೆರಿಗೆಗೆ 01.04.2011 ರಿಂದ 31ನೇ ಮಾರ್ಚ್ 2012ಕ್ಕೆ ಕೊನೆಗೊಳ್ಳುವ ವರ್ಷದಲ್ಲಿ ವ್ಯಾಪಾರಿಯು ಸಂದಾಯ ಮಾಡಬೇಕಾದ ತೆರಿಗೆಯನ್ನು ವಿನಾಯಿತಿಗೊಳಿಸಿ ದಿನಾಂಕ 29.03.2011ರಂದು ಹೊರಡಿಸಲಾದ ಎಫ್‌ಡಿ 35 ಸಿಎಸ್‌ಎಲ್ 11 ಅಧಿಸೂಚನೆ (II)

6) 2003ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಕಾಯ್ದೆಯಡಿ ಎಣ್ಣೆ ತೆಗೆದು ಅಕ್ಕಿ ತೌಡು ತೆಂಗಿನ ಕಾಯಿ, ಆದರೆ ಕೊಬ್ಬರಿ ಮತ್ತು ಒಣಗಿಸಿದ ತೆಂಗಿನಕಾಯಿ ಪುಡಿಯನ್ನು ಹೊರತುಪಡಿಸಿ ವ್ಯಾಪಾರಿಯು ಸಂದಾಯ ಮಾಡಬೇಕಾದ ತೆರಿಗೆಯನ್ನು ದಿನಾಂಕ 01.04.2011ರಿಂದ ವಿನಾಯಿತಿಗೊಳಿಸಿ ದಿನಾಂಕ 29.03.2011ರಂದು ಹೊರಡಿಸಲಾದ ಎಫ್‌ಡಿ 35 ಸಿಎಸ್‌ಎಲ್ 11 ಅಧಿಸೂಚನೆ (III)

7) 2003ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಕಾಯ್ದೆಯಡಿ ಕಥಾ ಚಿತ್ರಗಳನ್ನು ಬಳಸುವ ಹಕ್ಕಿನ ವರ್ಗಾವಣೆ, ಕಥಾ ಚಿತ್ರಗಳ ಸಂಬಂಧದಲ್ಲಿ ಕೃತಿಸ್ವಾಮ್ಯವನ್ನು ಬಳಸುವ ಹಕ್ಕಿನ ಮಾರಾಟ ಅಥವಾ ಹಕ್ಕಿನ ವರ್ಗಾವಣೆಗೆ ವ್ಯಾಪಾರಿಯು ಸಂದಾಯ ಮಾಡಬೇಕಾದ ತೆರಿಗೆಯನ್ನು ದಿನಾಂಕ 01.04.2011 ರಿಂದ ಜಾರಿಗೆ ಬರುವಂತೆ ವಿನಾಯಿತಿಗೊಳಿಸಿ ದಿನಾಂಕ 29.03.2011ರಂದು ಹೊರಡಿಸಲಾದ ಎಫ್‌ಡಿ 35 ಸಿಎಸ್‌ಎಲ್ 11 ಅಧಿಸೂಚನೆ (IV)

8) 2003ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಕಾಯ್ದೆಯಡಿ (1) (i) ಅಮೂಲ್ಯ ಅಥವಾ ಅರೆ-ಅಮೂಲ್ಯ ಹರಳುಗಳನ್ನು ಕೂಡಿಸಿದ ಅಥವಾ ಕೂಡಿರಿಸಿದ ಚಿನ್ನ ಬೆಳ್ಳಿ ಮತ್ತು ಇತರ ಬೆಲೆ ಬಾಳುವ ಲೋಹದ ವಸ್ತುಗಳ

ಮಾರಾಟ ಮತ್ತು (ii) ಅಮೂಲ್ಯ ಮತ್ತು ಅರೆ–ಅಮೂಲ್ಯ ಹರಳುಗಳ ಮಾರಾಟ

(2) ಅಮೂಲ್ಯ ಮತ್ತು ಅರೆ–ಅಮೂಲ್ಯ ಹರಳುಗಳನ್ನು ಕೂಡಿಸಿದ ಅಥವಾ ಕೂಡಿರಿಸಿದ ಚಿನ್ನ ಬೆಳ್ಳಿ ಲೋಹ ಆಭರಣ ತಯಾರಿಸುವ ಅಥವಾ ಸಂಸ್ಕರಿಸುವ ಅಥವಾ ಪೂರೈಸುವ ಸರಕು ರೂಪದ ಸ್ವತ್ತಿನ ವರ್ಗಾವಣೆಯ ಮೇಲೆ ವ್ಯಾಪಾರಿಯ ಸಂದಾಯ ಮಾಡಬೇಕಾದ ತೆರಿಗೆಯನ್ನು ಶೇ.ಡಕ್ಕೆ ಇಳಿಸಿ ದಿನಾಂಕ 29.03.2011ರಂದು ಹೊರಡಿಸಲಾದ ಎಫ್‌ಡಿ 35 ಸಿಎಸ್‌ಎಲ್ 11 ಅಧಿಸೂಚನೆ (V)

9) 2003 ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಕಾಯ್ದೆಯಡಿ 500 ರೂಪಾಯಿಗಳ ವರೆಗಿನ ಬೆಲೆಯ ಸ್ಕೂಲ್ ಬ್ಯಾಗುಗಳು, ಟೋಪಿಗಳು, ಮುಳ್ಳು ತಂತಿ ಮೇಲೆ ವ್ಯಾಪಾರಿಯು ಸಂದಾಯ ಮಾಡಬೇಕಾದ ತೆರಿಗೆಯನ್ನು ದಿನಾಂಕ 01.04.2011 ರಿಂದ ಜಾರಿಗೆ ಬರುವಂತೆ ಶೇ.5ಕ್ಕೆ ಇಳಿಸಿ ದಿನಾಂಕ 29.03.2011ರಂದು ಹೊರಡಿಸಲಾದ ಎಫ್‌ಡಿ 35 ಸಿಎಸ್‌ಎಲ್ 11 ಅಧಿಸೂಚನೆ (VI)ಗಳನ್ನು ಮಂಡಿಸುತ್ತೇನೆ.

II) ಶ್ರೀ ಜೆ. ಕರುಣಾಕರ ರೆಡ್ಡಿ (ಮಾನ್ಯ ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕದ ಭೂಸುಧಾರಣೆ ಕಾಯ್ದೆ 1961ರ ಕಲಂ 140ರಲ್ಲಿ ಪ್ರದತ್ತವಾಗಿರುವಂತೆ

ಲಿನೋಲಾಯ್ ಬೆಳೆಯನ್ನು ಬೆಳೆಯಲು ನೀಡಿರುವ ವಿನಾಯಿತಿಯನ್ನು ಹಿಂಪಡೆದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ ಕಂ.ಎ.217:ಎಲ್‌ಆರ್‌ಎ:93: ದಿನಾಂಕ 08–03.1994ನ್ನು ಮಂಡಿಸುತ್ತೇನೆ.

III) ಶ್ರೀ ಎಸ್. ಸುರೇಶ್ ಕುಮಾರ್, (ಮಾನ್ಯ ನಗರಾಭಿವೃದ್ಧಿ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು: ಮಾನ್ಯ ಅಧ್ಯಕ್ಷರೆ,

ಕರ್ನಾಟಕ ನಾಗರೀಕ ಸೇವಾ 1978ರ ಅಧಿನಿಯಮ 8(3)ರನ್ವಯ

ಕರ್ನಾಟಕ ಸಾಮಾನ್ಯ ಸೇವೆಗಳು (ಭಾಷಾಂತರ ನಿರ್ದೇಶನಾಲಯ) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2011ರಲ್ಲಿ ಅನುಸೂಚಿಯ ತಿದ್ದುಪಡಿ ಮಾಡಿ ಹೊರಡಿಸಲಾದ ಅಧಿಸೂಚನೆ ಸಂಖ್ಯೆ ಸಂವ್ಯಶಾಇ/66/ಭಾನಿವಿ/2009 ದಿನಾಂಕ 23.03.2011ನ್ನು ಮಂಡಿಸುತ್ತೇನೆ.

IV) ಶ್ರೀ ಲಕ್ಷ್ಮಣ ಎಸ್.ಸವದಿ (ಮಾನ್ಯ ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು): ಮಾನ್ಯ ಅಧ್ಯಕ್ಷರೆ,

1959ರ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮದ ಪ್ರಕರಣ 130ರ ಅಡಿಯಲ್ಲಿ

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1959ರ ಪ್ರಕರಣ 129 (1)ರಡಿಯಲ್ಲಿ 2008ರ ನಿಯಮ 1ರ ಉಪನಿಯಮ 2ಕ್ಕೆ ತಿದ್ದುಪಡಿ ಮಾಡಿ ಹೊರಡಿಸಿರುವ ಅಧಿಸೂಚನೆ ಸಂಖ್ಯೆ/ಸಿಓ/192/ಸಿಎಲ್ಎಂ/2010 ದಿನಾಂಕ 02.05.2011ನ್ನು ಮಂಡಿಸುತ್ತೇನೆ.

ಅಧ್ಯಕ್ಷರು ಮಂಡಿಸಲಾಯಿತು.

I. ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿ) ಮಾನ್ಯ ಅಧ್ಯಕ್ಷರೆ,

1. ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (7)ರನ್ವಯ ಘನತೆವೆತ್ತ ರಾಜ್ಯಪಾಲರ ಆದೇಶನುಸಾರ ಕೆ.ಆರ್.ಪುರಂ ಹೋಬಳಿ ಕುಂದನಹಳ್ಳಿ ಗ್ರಾಮದ ಸರ್ವೆ ನಂಬರ್ 124/1 ರಲ್ಲಿನ ಸಿ.ಎ.ನಿವೇಶನಕ್ಕೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಕ್ಷೆ ಮಾಡಲಾದ ಬಗ್ಗೆ ಲೋಕಾಯುಕ್ತರ ವಿಶೇಷ ವರದಿ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ 1976ರ ಕಲಂ 47(5) ಹಾಗೂ 47(ಎ)ರ ಮೇರೆಗೆ:

1. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಹಾಗೂ 2010–11ನೇ ಸಾಲಿನ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

II. ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) ಮಾನ್ಯ ಅಧ್ಯಕ್ಷರೆ,

1973 ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾಯ್ದೆಯ ಕಲಂ 39ರ ಮೇರೆಗೆ:

1. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು 2009–10ನೇ ಸಾಲಿನ ಲೆಕ್ಕಪರಿಶೋಧನೆ ವರದಿಯನ್ನು ಸಭೆಯ ಮಂಡಿಸುತ್ತೇನೆ.

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ಅಧಿನಿಯಮದ 48 ಮತ್ತು 49ನೇ ಪ್ರಕರಣದ ಮೇರೆಗೆ:

1. ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ.
2. ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ.
3. ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ.
4. ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ.
5. ಕೋಲಾರ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ
6. ರಾಮನಗರ–ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ.
7. ಕೆ.ಜಿ.ಎಫ್ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ.
8. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ.
9. ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ವಾರ್ಷಿಕ ವರದಿ.

1993ರ ಪ್ರಕರಣ 35(4)ರ ಮೇರೆಗೆ:

1. ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ 2009–10ನೇ ಸಲಿನ ಲೆಕ್ಕಪರಿಶೋಧನಾ ವರದಿ.

III. ಡಾ: ವಿ.ಎಸ್.ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು): ಮಾನ್ಯ ಅಧ್ಯಕ್ಷರು

2000ದ ಕರ್ನಾಟಕ ರಾಜ್ಯ ವಿಶ್ವ ವಿದ್ಯಾಲಯಗಳ ಅಧಿನಿಯಮದ ಕಲಂ 47(4) ಪ್ರಕರಣದ ಮೇರೆಗೆ:

1. ಮಂಗಳೂರು ವಿಶ್ವವಿದ್ಯಾಲಯದ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಕಾಯ್ದೆ (ಕರ್ನಾಟಕ ಆಕ್ಟ್ 22 ಆಫ್ 1986)

1. ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯುನಿವರ್ಸಿಟಿಯ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸಿರುತ್ತೇನೆ.

IV. ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು): ಮಾನ್ಯ ಅಧ್ಯಕ್ಷರೆ,

1993ರ ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮದ 262 (3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ:

1. ಉಡುಪಿ ಜಿಲ್ಲಾ ಪಂಚಾಯತ್ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
2. ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ನ 2009–10ನೇ ಸಾಲಿನ ವಾರ್ಷಿಕ ವರದಿ.
3. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್‌ನ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
4. ಬಾಗಲಕೋಟೆ ಜಿಲ್ಲಾ ಪಂಚಾಯತ್‌ನ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
5. ರಾಮನಗರ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
6. ಹಾವೇರಿ ಜಿಲ್ಲಾ ಪಂಚಾಯತ್‌ನ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
7. ಚಾಮರಾಜನಗರ ಜಿಲ್ಲಾ ಪಂಚಾಯತ್‌ನ 2008–09 ಮತ್ತು 2009–10ನೇ ಸಾಲಿನ ವಾರ್ಷಿಕ ವರದಿ.
8. ಕರ್ನಾಟಕ ಭೂಸೇನಾ ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.
9. ಕರ್ನಾಟಕ ರಾಜ್ಯದ ತಾಲ್ಲೂಕು ಪಂಚಾಯತ್‌ಗಳ 2008–09ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಕ್ರೋಡಿಕೃತ ಪ್ರತ್ಯೇಕ ಅಡಿಟ್ ವರದಿ.
10. ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ನ 2009–10ನೇ ಸಾಲಿನ ವಾರ್ಷಿಕ ವರದಿ.

11. ಚಿಕ್ಕಮಗಳೂರು ಜಿಲ್ಲಾ ಪಂಚಾಯತ್‌ನ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

V. ಶ್ರೀ ಎಸ್.ಸುರೇಶ್ ಕುಮಾರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಶ್ರೀ ಮುರುಗೇಶ್ ರುದ್ರಪ್ಪ ನಿರಾಣಿ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಪರವಾಗಿ):

1956ರ ಕಂಪನಿ ಅಧಿನಿಯಮದ 619 (ಎ) (2) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
2. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

VI. ಶ್ರೀ ಆರ್. ಅಶೋಕ್ (ಗೃಹ ಮತ್ತು ಸಾರಿಗೆ ಸಚಿವರು): ಮಾನ್ಯ ಅಧ್ಯಕ್ಷರೆ,

1950ರ ರಸ್ತೆ ಸಂಸ್ಥೆ ಅಧಿನಿಯಮ ಕಲಂ 33(4)ರ ಪ್ರಕರಣದ ಮೇರೆಗೆ:

1. ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

VII. ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು):ಮಾನ್ಯ ಅಧ್ಯಕ್ಷರೆ,

1980ರ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಅಧಿನಿಯಮದ ಕಲಂ 24 ಹಾಗೂ 25ರನ್ವಯ:

1. ಕಾಡಾ ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಗಳು ಬೆಳಗಾವಿ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
2. ಕಾಡಾ ನೀರಾವರಿ ಯೋಜನೆ ವಲಯ ಗುಲ್ಬರ್ಗಾ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

VIII. ಶ್ರೀ ರೇವೂನಾಯಕ್ ಬೆಳಮಗಿ (ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು): ಮಾನ್ಯ ಅಧ್ಯಕ್ಷರೆ,

ವಿಶ್ವವಿದ್ಯಾಲಯ ಕಾಯ್ದೆ 2004ರ ಕಲಂ 43ರ ಪ್ರಕರಣದ ಮೇರೆಗೆ

1. ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್ 2009–10ನೇ ಸಾಲಿನ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

IX. ಶ್ರೀ ಉಮೇಶ್ ವಿ ಕತ್ತಿ (ಕೃಷಿ ಸಚಿವರು): ಮಾನ್ಯ ಅಧ್ಯಕ್ಷರೆ,

1956ರ ಕಂಪನಿಗಳ ಅಧಿನಿಯಮದ 619ಎ(2) ರ ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಆಗ್ರೋ ಕಾರ್ನ್ ಪ್ರಾಡೆಕ್ಟ್ಸ್ ಲಿಮಿಟಿಡ್‌ನ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ 2009ರ ಕಲಂ 57ರ ಪ್ರಕರಣದ ಮೇರೆಗೆ:

1. ರಾಯಚೂರು ಕೃಷಿ ವಿಶ್ವವಿದ್ಯಾಲಯದ 2009–10ನೇ ಸಾಲಿನ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ,

X. ಶ್ರೀ ಎಸ್.ಸುರೇಶ್‌ಕುಮಾರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಶ್ರೀ ಕೃಷ್ಣ ಪಾಲೇಮಾರ್ (ಬಂದರು, ಒಳನಾಡು, ಜಲಸಾರಿಗೆ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಮೀನುಗಾರಿಕೆ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ,

1956ರ ಕಂಪನಿಗಳ ಅಧಿನಿಯಮದ 619ಎ(2) ರ ಪ್ರಕರಣದ ಮೇರೆಗೆ:

1. ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

XI. ಶ್ರೀ ಸಿ.ಹೆಚ್.ವಿಜಯಕುಮಾರ್ (ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು):ಮಾನ್ಯ ಅಧ್ಯಕ್ಷರೆ,

1956ರ ಕಂಪನಿ ಅಧಿನಿಯಮದ 619 (ಎ) (2) ಪ್ರಕರಣದ ಮೇರೆಗೆ:

1. ದಿ ಮೈಸೂರು ಮ್ಯಾಚ್ ಕಂಪನಿ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇವೆ.

XII. ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಶ್ರೀ ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರ ಪರವಾಗಿ: ಮಾನ್ಯ ಅಧ್ಯಕ್ಷರೆ,

1956ರ ಕಂಪನಿಗಳ ಅಧಿನಿಯಮದ 619 (ಎ) (2) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

XIII. ಶ್ರೀ ಎಸ್ ಸುರೇಶ್‌ಕುಮಾರ್ (ಕಾನೂನು ಸಂಸದೀಯ ವ್ಯವಹಾರಗಳ ಸಚಿವರು): ಕುಮಾರಿ ಶೋಭಾ ಕರಂದ್ಲಾಜೆ (ಇಂಧಿನ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ,

1. ಕರ್ನಾಟಕ ನವೀಕರಿಸಬಹುದಾದ ಇಂಧಿನ ಅಭಿವೃದ್ಧಿ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
2. ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್‌ನ 2007–08 ಮತ್ತು 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

XIV. ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) ಮಾನ್ಯ ಅಧ್ಯಕ್ಷರೆ,

1956ರ ಕಂಪನಿಗಳ ಅಧಿನಿಯಮದ 619 (ಎ) (2)ನೇ ಪ್ರಕರಣದ ಮೇರೆಗೆ:

1. ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

XV. ಲಕ್ಷ್ಮಣ ಸಂಗಪ್ಪ ಸವದಿ (ಸಹಕಾರ ಸಚಿವರು): ಮಾನ್ಯ ಅಧ್ಯಕ್ಷರೆ,

1962ರ ಉಗ್ರಾಣ ನಿಗಮ ಕಾಯ್ದೆಯ 31(10)ನೇ ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಉಗ್ರಾಣ ನಿಗಮದ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

XVI. ಶ್ರೀ ವಿ.ಸೋಮಣ್ಣ (ವಸತಿ ಸಚಿವರು): ಮಾನ್ಯ ಅಧ್ಯಕ್ಷರೆ, 1962ರ ಕರ್ನಾಟಕ ಗೃಹ ಮಂಡಳಿಯ ಅಧಿನಿಯಮ ಪ್ರಕರಣ 55(3)ರ ಮೇರೆಗೆ:

1. ಕರ್ನಾಟಕ ಗೃಹ ಮಂಡಳಿಯ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು ಮಂಡಿಸಲಾಯಿತು.

5. ವಿಷಯ: ವಿರೋಧ ಪಕ್ಷದ ನಾಯಕರ ಜೊತೆ ಚರ್ಚಿಸಿ ಸದನಕ್ಕೆ ಹಾಜರಾಗುವಂತೆ

ಶ್ರೀ ಪಿ.ಎಂ. ನರೇಂದ್ರಸ್ವಾಮಿ: ಅವರು ವಿಷಯ ಪ್ರಸ್ತಾಪ ಮಾಡಿ ಹೊರಗಡೆ ಹೋಗಿರುವುದು ಎಲ್ಲರಿಗೂ ಗೊತ್ತಿರುವ ವಿಚಾರ. ಅದರಲ್ಲಿಯೂ ವಿಶೇಷವಾಗಿ ನಮ್ಮ ವಿಚಾರವಾಗಿ ತಾವು ತೆಗೆದುಕೊಂಡಂತಹ ನಿರ್ಣಯದ ವಿರುದ್ಧವಾಗಿ ಸುಪ್ರೀಂ ಕೋರ್ಟಿನಲ್ಲಿ ನ್ಯಾಯ ಪಡೆದು ಬಂದಂತಹ ವಿಚಾರವಾಗಿ ಅವರು ಪ್ರಶ್ನೆ ಎತ್ತಿದರು. ನಾವು ತಮ್ಮಲ್ಲಿ ವಿನಂತಿ ಮಾಡಿಕೊಳ್ಳುವುದು ಇಷ್ಟೆ. ಆ ವಿಚಾರವನ್ನು ನಿಯಮಾವಳಿ ಪ್ರಕಾರ ಪ್ರಸ್ತಾಪ ಮಾಡುವುದಕ್ಕಾಗುವುದಿಲ್ಲ ಎನ್ನುವಂತಹ ರೂಲಿಂಗ್ ಅನ್ನು ತಾವು ಕೊಟ್ಟಿದ್ದೀರಿ. ಆದರೆ ವಾಸ್ತವಾಂಶದಲ್ಲಿ ತಮ್ಮ ರೂಲಿಂಗ್ ವಿರುದ್ಧವಾಗಿ ಸುಪ್ರೀಂ ಕೋರ್ಟ್ ನಿರ್ಣಯ ಕೈಗೊಂಡಂತಹ ವಿಚಾರವನ್ನು ಪ್ರಸ್ತಾಪವೇ ಮಾಡಬಾರದು ಎನ್ನುವಂತಹ ವಿಚಾರ ಎಷ್ಟರ ಮಟ್ಟಿಗೆ ಸಮಂಜಸ ಎನ್ನುವ ಪ್ರಶ್ನೆ ಇಲ್ಲಿ ಎತ್ತಿರತಕ್ಕಂಥದ್ದು. ಒಬ್ಬ ಕಿರಿಯ ಸದಸ್ಯನಾಗಿ ನಿಯಮಾವಳಿಗಳ ಬಗ್ಗೆ ತಮಗೆ ತಿಳುವಳಿಗೆ ಕೊಡುವಂತಹ ಪ್ರಶ್ನೆ ನನ್ನಲ್ಲಿ ಇಲ್ಲ. ಆದರೆ ತಮ್ಮ ಮುಖಾಂತರ ಮುಂದಿನ ಸದನಕ್ಕೆ ಏನಾದರೂ ಒಂದು ರೂಪು ರೇಷೆಯನ್ನು ನೀಡಬೇಕಾದರೆ, ಅಥವಾ ಈ ಸದನವನ್ನು ಗೌರವಯುತವಾಗಿ ನಾವು ನಡೆಸುತ್ತಿದ್ದೇವೆ ಕೋರ್ಟುಗಳ ಅಭಿಪ್ರಾಯಕ್ಕೆ ಮಾನ್ಯತೆ ನೀಡುತ್ತಿದ್ದೇವೆ, ಎಂದರೆ ಆ ಚರ್ಚೆಗೆ ಆಸ್ಪದ ಕೊಡುವುದು ಸೂಕ್ತ. ತಮ್ಮ ಪೀಠ ಇದನ್ನು ಪರಿಗಣಿಸಬೇಕೆಂದು ನನ್ನ ಮನವಿ.

ಅಧ್ಯಕ್ಷರು ದಯವಿಟ್ಟು ಕುಳಿತುಕೊಳ್ಳಿ.

ಶ್ರೀ ವೆಂಕರಮಣಪ್ಪ: ವಿರೋಧ ಪಕ್ಷದವರು ಹೊರಗಡೆ ಹೋದಂತಹ ಸಂದರ್ಭದಲ್ಲಿ ಚರ್ಚಿಸಿದರೆ ಹೇಗೆ?